Akashvani : Bangalore
Regional Bulletin In Kannada
01.10.2024 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಇಂದು ಹಿರಿಯ ನಾಗರಿಕರ ದಿನಾಚರಣೆ ; ಹಿರಿಯ ನಾಗರಿಕರ ಸಾಧನೆಗಳು ಯುವಜನರಿಗೆ ಸ್ಫೂರ್ತಿ - ಮುಖ್ಯಮಂತ್ರಿ ಸಿದ್ದರಾಮಯ್ಯ
- ಮುಡಾ ನಿವೇಶನ ವಾಪಸ್ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮತ್ತಷ್ಟು ಸಂಕಷ್ಟ - ಸಂಸದ ಬಸವರಾಜ್ ಬೊಮ್ಮಾಯಿ
- ಅಮೆರಿಕದಲ್ಲಿ ಸೆಮಿಕಂಡಕ್ಟರ್ ಉದ್ಯಮದ ಜಾಗತಿಕ ಕಂಪನಿಗಳ ಮುಖ್ಯಸ್ಥರ ಜೊತೆ ಸಚಿವ ಎಂ.ಬಿ. ಪಾಟೀಲ್ ಮಾತುಕತೆ
- ನಾಳೆ ಗಾಂಧಿ ಜಯಂತಿ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ 'ಸ್ವಚ್ಛತಾ ಆಂದೋಲನ ಪ್ರತಿಜ್ಞಾ ವಿಧಿ' ಕಾರ್ಯಕ್ರಮ

<><*<><>*><>

ಹಿರಿಯ ನಾಗರಿಕರ ಸಾಧನೆಗಳು ಯುವಜನರಿಗೆ ಸ್ಫೂರ್ತಿ. ಸಮಾಜಮುಖಿಯಾಗಿ ಕೆಲಸ ಮಾಡುವ ಮೂಲಕ ಹಿರಿಯರಿಗೆ ಗೌರವ ಸಲ್ಲಿಸಬೇಕಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಇಂದು ಆಯೋಜಿಸಲಾಗಿದ್ದ ವಿಶ್ವ ಹಿರಿಯ ನಾಗರಿಕರ ದಿನಾಚರಣೆ-೨೦೨೪ ಉದ್ಘಾಟಿಸಿ ಮಾತನಾಡಿದ ಅವರು, ಈ ಬಾರಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆಯನ್ನು, 'ಘನತೆಯ ಬಾಳಿನೊಂದಿಗೆ ವಯೋಪಕ್ವತೆ: ವಿಶ್ವದಾದ್ಯಂತ ಹಿರಿಯ ಜೀವಿಗಳಿಗೆ ಆರೈಕೆ ಮತ್ತು ಬೆಂಬಲ ವ್ಯವಸ್ಥೆಗಳನ್ನು ಸದೃಢಗೊಳಿಸುವುದರ ಮಹತ್ವ' ಎಂಬ ವಿಶ್ವಸಂಸ್ಥೆಯ ಘೋಷವಾಕ್ಯದೊಂದಿಗೆ ಆಚರಿಸಲಾಗುತ್ತಿದೆ ಎಂದರು. ೨೦೧೧ರ ಜನಗಣತಿ ಪ್ರಕಾರ, ರಾಜ್ಯದಲ್ಲಿ ಸುಮಾರು ೫೭.೯೧ ಲಕ್ಷದಷ್ಟು ಹಿರಿಯ ನಾಗರಿಕರಿದ್ದಾರೆ. ಇತ್ತೀಚಿನ ದಿನಗಳಲ್ಲಿ ವೃದ್ಧಾಶ್ರಮಗಳು ಹೆಚ್ಚುತ್ತಿವೆ. ಮಕ್ಕಳು ವಿದೇಶದಲ್ಲಿ ನೆಲಿಸಿ, ತಂದೆ-ತಾಯಿಯನ್ನು ಪೋಷಿಸಲು ಸಾಧ್ಯವಾಗದೆ, ವೃದ್ಧಾಶ್ರಮಗಳಿಗೆ ಸೇರಿಸುತ್ತಾರೆ. ಸುಮಾರು ೫೦ ಲಕ್ಷ ಹಿರಿಯ ನಾಗರಿಕರಿಗೆ ಮಾಸಾಶನ ನೀಡಲಾಗುತ್ತಿದೆ. ಈ ಮಾಸಾಶನದ ಮೊತ್ತವನ್ನು ಹೆಚ್ಚಿಸುವ ಬಗ್ಗೆ ಪರಿಶೀಲಿಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

<><*<><>*><>

ಮುಡಾ ನಿವೇಶನಗಳನ್ನು ವಾಪಸ್ ನೀಡುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತಷ್ಟು ಸಂಕಷ್ಟವನ್ನು ಮೈಮೇಲೆ ಎಳೆದುಕೊಂಡಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ್ ಬೊಮ್ಮಾಯಿ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಡಾ ನಿವೇಶನಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಮೊದಲೇ ವಾಪಸ್ ಮಾಡಬೇಕಿತ್ತು. ಈ ಹಿಂದೆಯೇ ಹೈಕೋರ್ಟ್ ನ್ಯಾಯಮೂರ್ತಿಗಳ ಮೂಲಕ ತನಿಖೆ ಮಾಡಿಸಿದ್ದರೆ, ಸಿದ್ದರಾಮಯ್ಯ ಅವರ ಪ್ರಾಮಾಣಿಕತೆ ಬಗ್ಗೆ ಪ್ರಶ್ನೆ ಬರುತ್ತಿರಲಿಲ್ಲ. ಆದರೆ ಆಗ ಸಮರ್ಥನೆ ಮಾಡಿಕೊಂಡರು. ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿ, ಪ್ರಕರಣ ದಾಖಲಾಗಿ, ತನಿಖೆ ನಡೆಯುತ್ತಿದೆ. ಈಗ ವಾಪಸ್ ಮಾಡಿರುವುದರಿಂದ ಹಲವಾರು ಪ್ರಶ್ನೆಗಳು ಉದ್ಭವಿಸಿವೆ ಎಂದು ಹೇಳಿದರು. ನಿವೇಶನ ವಾಪಸ್ ಮಾಡುವ ಮೂಲಕ ಅಕ್ರಮ ಆಗಿರುವುದನ್ನು ಸಿದ್ದರಾಮಯ್ಯನವರೇ

ಒಪ್ಪಿಕೊಂಡಿದ್ದಾರೆ. ನಿವೇಶನ ಹಂಚಿಕೆ ಕಾನೂನುಬಾಹಿರವಾಗಿ ಆಗಿದೆ ಎನ್ನುವುದನ್ನು ಅವರೇ ಒಪ್ಪಿಕೊಂಡಂತಾಗಿದೆ ಎಂದು ಬಸವರಾಜ ಬೊಮ್ಮಾಯಿ ಆರೋಪಿಸಿದರು

<><*<><>*><>

ರಾಜ್ಯ ಬೃಹತ್ ಹಾಗೂ ಮಧ್ಯಮ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ್ ಅವರು ಅಮೆರಿಕಗೆ ಭೇಟಿ ನೀಡಿದ್ದು, ಸೆಮಿಕಂಡಕ್ಟರ್ ಉದ್ಯಮದ ಪ್ರಮುಖ ಜಾಗತಿಕ ಕಂಪನಿಗಳ ಮುಖ್ಯಸ್ಥರ ಜೊತೆ ಸರಣಿ ಮಾತುಕತೆ ನಡೆಸಿದರು. ರಾಜ್ಯದಲ್ಲಿ ವೇಗವಾಗಿ ವಿಸ್ತರಿಸುತ್ತಿರುವ ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಅಮೆರಿಕದ ಕಂಪನಿಗಳ ಜೊತೆಗೆ ಹೆಚ್ಚಿನ ಸಹಯೋಗದ ಅವಕಾಶಗಳ ಕುರಿತು ಸಚಿವರು ಚರ್ಚಿಸಿದ್ದಾರೆ. ಸೆಮಿಕಂಡಕ್ಟರ್ ಅಭಿವೃದ್ಧಿಯ ಕೇಂದ್ರವಾಗಿ ಹೊರಹೊಮ್ಮುವ ರಾಜ್ಯದ ಮಹತ್ವಾಕಾಂಕ್ಷೆ ಸಾಕಾರಗೊಳ್ಳುವುದಕ್ಕೆ ಈ ಭೇಟಿಯು ನೆರವಾಗಲಿದೆ. ರಾಜ್ಯದ ಸೆಮಿಕಂಡಕ್ಟರ್ ಉದ್ದಿಮೆಗೆ ಚೇತರಿಕೆ ನೀಡುವ ಉದ್ದೇಶದಿಂದ, ಅಮೆರಿಕದ ಸೆಮಿಕಂಡಕ್ಟರ್ ವಲಯದ ನಾಲ್ಕು ಪ್ರಮುಖ ಕಂಪನಿಗಳಾದ ಯುಜೆನಸ್ ಟೆಕ್ನಾಲಜಿ, ಲ್ಯಾಮ್ ರಿಸರ್ಚ್, ಅಲ್ಫಾವೇವ್ ಸೆಮಿ ಮತ್ತು ಎಂಐಪಿಎಸ್ ಟೆಕ್ನಾಲಜೀಸ್‌ನ ಉನ್ನತ ಅಧಿಕಾರಿಗಳ ಜೊತೆಗೆ ಸಚಿವ ಎಂ.ಬಿ.ಪಾಟೀಲ್ ಸಮಾಲೋಚನೆ ನಡೆಸಿದರು. ಮುಂದಿನ ವರ್ಷ ಬೆಂಗಳೂರಿನಲ್ಲಿ ನಡೆಯಲಿರುವ ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ಪಾಲ್ಗೊಳ್ಳುವಂತೆ ಸಚಿವರು, ಈ ಉದ್ದಿಮೆಗಳ ಪ್ರಮುಖರಿಗೆ ಇದೇ ಸಂದರ್ಭದಲ್ಲಿ ಔಪಚಾರಿಕವಾಗಿ ಆಹ್ವಾನ ನೀಡಿದರು.

<><*<><>*><>

ಮಹಾತ್ಮ ಗಾಂಧಿಜೀಯವರ ೧೫೫ನೇ ಜನ್ಮದಿನಾಚರಣೆಯ ಅಂಗವಾಗಿ ನಾಳೆ 'ಸ್ವಚ್ಛತಾ ಆಂದೋಲನ ಪ್ರತಿಜ್ಞಾ ವಿಧಿ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ನಾಗರಿಕರೆಲ್ಲರೂ ಆನ್‌ಲೈನ್ ಮೂಲಕ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಶಿಕ್ಷಣ ವಿಭಾಗದ ವಿಶೇಷ ಆಯುಕ್ತರಾದ ಪ್ರೀತಿ ಗೆಹ್ಲೋಟ್ ಮನವಿ ಮಾಡಿದ್ದಾರೆ. ಪಾಲಿಕೆಯ ಯೂಟ್ಯೂಬ್ ಲಿಂಕ್ ಮೂಲಕ ಪ್ರತಿಜ್ಞೆ ಸ್ವೀಕರಿಸಬಹುದಾಗಿದೆ. ನಗರದ ಶಿವಾನಂದ ವೃತ್ತದ ಬಳಿಯಿರುವ ಗಾಂಧಿ ಭವನದಿಂದ ಪ್ರಾರಂಭವಾಗಿ ಶಿವಾನಂದ ವೃತ್ತ, ರೇಸ್ ಕೋರ್ಸ್ ವೃತ್ತ, ಬಸವೇಶ್ವರ ವೃತ್ತ, ವಾಲ್ಮೀಕಿ ವೃತ್ತದ ಮೂಲಕ ವಿಧಾನಸೌಧದ ಪಶ್ಚಿಮ ದ್ವಾರದವರೆಗೆ ೧ ಕಿಲೋ ಮೀಟರ್ 'ಗಾಂಧಿ ನಡಿಗೆ'ಯನ್ನು ನಾಳೆ ಬೆಳಗ್ಗೆ ೬ ಗಂಟೆಗೆ ಹಮ್ಮಿಕೊಳ್ಳಲಾಗಿದೆ. ಬ್ಯಾಂಕ್ವೆಟ್ ಹಾಲ್‌ನಲ್ಲಿ ಕಾರ್ಯಕ್ರಮ ನಡೆಯಲಿದ್ದು, ಬಳಿಕ ಸ್ವಚ್ಛತಾ ಶ್ರಮದಾನ ನಡೆಯಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

<><*<><>*><>

ಬೆಂಗಳೂರು ಆಕಾಶವಾಣಿ ಆವರಣದಲ್ಲಿಂದು ಸ್ವಚ್ಛತೆಯೇ ಸೇವೆ ಮತ್ತು ತಾಯಿ ಹೆಸರಿನಲ್ಲಿ ಗಿಡ ನೆಡುವ ಅಭಿಯಾನ ಹಮ್ಮಿಕೊಳ್ಳಲಾಗಿತ್ತು. ಆಕಾಶವಾಣಿಯ ನಿಲಯ ನಿರ್ದೇಶಕರಾದ ಆರ.ವೆಂಕಟೇಶ್ ಅವರು, ಅಭಿಯಾನದಲ್ಲಿ ಪಾಲ್ಗೊಂಡು, ವರ್ಷವಿಡೀ ಈ ಸ್ವಚ್ಛತೆಯ ಸೇವೆ ಮಾಡಬೇಕು. ಸ್ವಚ್ಛತೆಯೊಂದಿಗೆ ಸಕಾರಾತ್ಮಕ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಕಿವಿ ಮಾತು ಹೇಳಿದರು. ಸೆಪ್ಟೆಂಬರ್ ೧೭ ರಿಂದ ಅಕ್ಟೋಬರ್ ೨ ರವರೆಗೆ ಆಕಾಶವಾಣಿ ಬೆಂಗಳೂರು ನಿಲಯ ಸ್ವಚ್ಛತಾ ಹೀ ಸೇವಾ ಕಾರ್ಯಕ್ರಮ ಹಮ್ಮಿಕೊಂಡಿರುವುದಾಗಿ ತಿಳಿಸಿದ ಅವರು, ಇದರ ಭಾಗವಾಗಿ ನಿಲಯದ ಹಳೆಯ ಗ್ರಾಮೋಫೋನ್ ಸಂಗ್ರಹಗಾರ ಮತ್ತು ಕಡತಗಳ ಸ್ವಚ್ಛತೆಯತ್ತ ಗಮನ ಹರಿಸಲಾಯಿತು ಎಂದರು. ಸ್ವಚ್ಛತಾ ಮತ್ತು ಏಕ್ ಪೇಡ್ ಮಾ ಕೆ ನಾಮ್ ಅಭಿಯಾನದಲ್ಲಿ ಆಕಾಶವಾಣಿ ಅಧಿಕಾರಿಗಳು ಮತ್ತು ಸಿಬ್ಬಂದಿ ಭಾಗವಹಿಸಿದ್ದರು. ಆಕಾಶವಾಣಿ ಬಾತ್ಮೀದಾರರಾದ ಎಚ್.ಆರ್. ಸುಧೀಂದ್ರ, ಸುದ್ದಿ ಸಂಪಾದಕರಾದ ಪೊನ್ನುಮೋನ್, ಕೇರ್ ಟ್ರಸ್ಟ್ ಸಂಸ್ಥೆಯ ಮಾರ್ಗದರ್ಶಕ ಮತ್ತು ತರಬೇತುದಾರರಾದ ರಾಜೇಂದ್ರ ಜೀವನ್ ಮುಖಿ ಸ್ವಯಂ ಸೇವಾ ಸಂಸ್ಥೆಯ ಸಂಸ್ಥಾಪಕರಾದ ರೂಪ, ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

<><*<><>*><>

ಮಹಾತ್ಮ ಗಾಂಧೀಜಿಯವರ ಸ್ವಚ್ಛ ಭಾರತ ಕನಸು ನನಸು ಮಾಡುವ ನಿಟ್ಟಿನಲ್ಲಿ ಸ್ವಚ್ಛತಾ ಹೀ ಸೇವಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ನಮ್ಮ ಸುತ್ತಮುತ್ತಲಿನ ಪರಿಸರ ಸ್ವಚ್ಛವಾಗಿರಬೇಕು. ಪ್ರತಿಯೊಬ್ಬರೂ ಪರಿಸರ ಸ್ವಚ್ಛತೆಗೆ ಆದ್ಯತೆ ನೀಡಬೇಕಾಗಿದೆ ಎಂದು ೧ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಪರಮೇಶ್ವರ ಪ್ರಸನ್ನ ಬಿ. ಹೇಳಿದ್ದಾರೆ. ಹುಬ್ಬಳ್ಳಿಯ ಹಳೇ ನ್ಯಾಯಾಲಯದ ಆವರಣದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ ಮತ್ತು ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಇವುಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಸ್ವಚ್ಛತಾ ಹೀ ಸೇವಾ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಹಸಿ ಕಸ ಮತ್ತು ಒಣ ಕಸ ವಿಂಗಡಿಸಿ, ವಿಲೇವಾರಿ ಮಾಡಬೇಕಾಗಿದೆ. ಪರಿಸರವನ್ನು ಸ್ವಚ್ಛಂದವಾಗಿ ಇಟ್ಟುಕೊಳ್ಳುವಲ್ಲಿ ಪೌರ ಕಾರ್ಮಿಕರ ಕಾರ್ಯ ಮೆಚ್ಚುವಂತಹದು. ಪ್ಲಾಸ್ಟಿಕ್ ಬಳಕೆ ಕಡಿಮೆ ಮಾಡಬೇಕಿದೆ ಎಂದು ಅವರು ಹೇಳಿದರು.

<><*<><>*><>

ವಿಶ್ವವಿಖ್ಯಾತ ನಾಡಹಬ್ಬ ದಸರಾ ಮಹೋತ್ಸವದ ಗಜಪಡೆ ಹಾಗೂ ಅಶ್ವರೋಹಿ ಪಡೆಗಳಿಗೆ ಇಂದು ಮೂರನೇ ಹಂತದ ಕುಶಾಲತೋಪಿನ ಯಶಸ್ವಿ ತಾಲೀಮು ನಡೆಸಲಾಗಿದೆ. ದಸರಾ ಮಹೋತ್ಸವದ ಜಂಬೂ ಸವಾರಿಗೆ ೧೧ ದಿನಗಳು ಬಾಕಿ ಉಳಿದಿರುವ ಹಿನ್ನೆಲೆಯಲ್ಲಿ ಇಂದು ವಸ್ತುಪ್ರದರ್ಶನದ ಆವರಣದಲ್ಲಿ ಚಿನ್ನದ ಅಂಬಾರಿ ಹೊರುವ ಅಭಿಮನ್ಯು, ಕಂಜನ್, ಮಹೇಂದ್ರ, ವರಲಕ್ಷ್ಮಿ, ಪ್ರಶಾಂತ ಸೇರಿದಂತೆ ೧೪ ಆನೆಗಳ ಎದುರು ಮೂರು ಸುತ್ತಿನ ೨೧ ಕುಶಾಲತೋಪು ಹಾರಿಸುವ ಮೂಲಕ ತಾಲೀಮು ನಡೆಸಲಾಯಿತು. ಕುಶಾಲು ತೋಪಿನ ಸಿಡಿ ಮದ್ದಿನ ಶಬ್ದಕ್ಕೆ ಎಲ್ಲಾ ಆನೆಗಳು ಹೊಂದಿಕೊಂಡಿವೆ. ಎಲ್ಲಾ ಆನೆಗಳು ಆರೋಗ್ಯಯುತವಾಗಿವೆ ಎಂದು ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ತಿಳಿಸಿದ್ದಾರೆ.

<><*<><>*><>

ಕೇಂದ್ರ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯವು ನ್ಯಾಷನಲ್ ಇನ್ನೋವೇಷನ್ ಫೌಂಡೇಷನ್ ಸಹಯೋಗದೊಂದಿಗೆ ನವದೆಹಲಿಯಲ್ಲಿ ಇತ್ತೀಚೆಗೆ ಆಯೋಜಿಸಿದ್ದ 'ಇನ್‌ಸ್ಪೈರ್ ಮಾನಕ್ ಅವಾರ್ಡ್' ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ರಾಜ್ಯದ ವಿದ್ಯಾರ್ಥಿಗಳು ಕಂಚಿನ ಪದಕದೊಂದಿಗೆ ಎರಡು ರಾಷ್ಟ್ರಮಟ್ಟದ ಪ್ರಶಸ್ತಿಗಳನ್ನು ಗೆದ್ದಿದ್ದಾರೆ. ಸ್ಪರ್ಧೆಯಲ್ಲಿ ರಾಜ್ಯದ ಒಟ್ಟು ೩೯ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಅಲ್ಲದೇ ಅತಿ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ಭಾಗವಹಿಸಿದ ರಾಜ್ಯ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಉಡುಪಿ ಜಿಲ್ಲೆಯ ಕಾರ್ಕಳ ತಾಲೂಕಿನ ಕುಕ್ಕುಜೆ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ ಅಮೂಲ್ಯ ಹೆಗ್ಡೆ ಸಿದ್ಧಪಡಿಸಿದ ``Flood Detecting Pole" ಮಾದರಿಗೆ ಕಂಚಿನ ಪದಕ ದೊರೆಯಿತು. ಇದೇ ವೇಳೆ ಬೆಂಗಳೂರು ನಗರ ಜಿಲ್ಲೆಯ ದಕ್ಷಿಣ ವಲಯ-೦೪ರ ವೈದೇಹಿ ಸ್ಕೂಲ್ ಆಫ್ ಎಕ್ಸಲೆನ್ಸ್ ವಿದ್ಯಾರ್ಥಿನಿ ಈಶ್ವರಿ ಮೋರೆ ಸಿದ್ಧಪಡಿಸಿದ ``Fall Detection in the Toilet using Thermal Imaging" ಮಾದರಿಯು ಕಂಚಿನ ಪದಕ ಗಳಿಸಿತು.

<><*<><>*><>

ನಗರಾಭಿವೃದ್ಧಿ ಇಲಾಖೆಯು ಗದಗ ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆಸ್ತಿಗಳ ಹಕ್ಕು ವರ್ಗಾವಣೆಗೆ ಸಂಬಂಧಿಸಿದಂತೆ ಇ-ಆಸ್ತಿ ತಂತ್ರಾಂಶ ಮತ್ತು ಕಾವೇರಿ ತಂತ್ರಾಂಶವನ್ನು ಸಂಯೋಜನೆ ಮಾಡಲು ಸಮ್ಮತಿ ನೀಡಿದೆ ಎಂದು ಗದಗ ಜಿಲ್ಲಾಧಿಕಾರಿ ಗೋವಿಂದ ರೆಡ್ಡಿ ತಿಳಿಸಿದ್ದಾರೆ.

<><*<><>*><>

ಇನ್ನು ಸಂಕ್ಷಿಪ್ತ ಸುದ್ದಿಗಳು...

೧. ಆರು ವರ್ಷದ ಒಳಗಿನ ಮಕ್ಕಳು ಗರ್ಭಿಣಿಯರು ಮತ್ತು ಹಾಲುಣಿಸುವ ತಾಯಂದಿರಿಗೆ ಪೌಷ್ಟಿಕಾಂಶದ ಫಲಿತಾಂಶಗಳನ್ನು ಸುಧಾರಿಸಲು ವಿಜಯಪುರ ಜಿಲ್ಲೆಯಲ್ಲಿ ಪೋಷಣ್ ಅಭಿಯಾನ್ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಕೆ.ಕೆ.ಚವ್ಹಾಣ್ ತಿಳಿಸಿದ್ದಾರೆ.

೨. ಉತ್ತರಕನ್ನಡ ಜಿಲ್ಲೆಯ ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ರುಡ್ ಸೆಟ್ ತರಬೇತಿ ಸಂಸ್ಥೆಯಲ್ಲಿ ೧೮ ರಿಂದ ೪೫ ವಯಸ್ಸಿನ ಗ್ರಾಮೀಣ ಭಾಗದ ನಿರುದ್ಯೋಗ ಯುವಕ, ಯುವತಿಯರಿಗಾಗಿ ಇದೇ ೨೧ ರಿಂದ ೧೦ ದಿನಗಳ ಅಗರಬತ್ತಿ ತಯಾರಿಕೆ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಹಳಿಯಾಳ ಕೆನರಾ ಬ್ಯಾಂಕ್ ದೇಶಪಾಂಡೆ ರುಡ್‌ಸೆಟ್ ಸಂಸ್ಥೆಯನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

೩. ಪ್ರಸಕ್ತ ಸಾಲಿನ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಇಲಾಖಾ ಅನುಮೋದಿತ ಹನಿ ನೀರಾವರಿ ಘಟಕ ಅಳವಡಿಕೆಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಮಾರ್ಗಸೂಚಿ ಪ್ರಕಾರ, ೫ ಎಕರೆವರೆಗಿನ ಪ್ರದೇಶಕ್ಕೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ವರ್ಗದ ರೈತರಿಗೆ ಶೇಖಡ ೯೦ರಷ್ಟು ಸಹಾಯಧನ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಉತ್ತರಕನ್ನಡ ಜಿಲ್ಲಾ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಾರವಾರ ಕಚೇರಿಗೆ ಸಂಪರ್ಕಿಸುವಂತೆ ತೋಟಗಾರಿಕಾ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

೪. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ವಿಶೇಷಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆ-೨೦೨೪ ರ ಸಮಾರಂಭ ಹಮ್ಮಿಕೊಳ್ಳಲಾಗಿತ್ತು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>